# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**


ಸಂಖ್ಯೆ : ಬೆಂಅಪ್ರಾ/ನಯೋಸ/DLP-06/2024-25/ 1011 /2025-26.
No.

ದಿನಾಂಕ : 29/05/2025
Date :

**"ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಆದೇಶ"**

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19ಗುಂ ಮತ್ತು ಸ.ನಂ.150 ರ ಪೈಕಿ 3ಎ-37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08ಚ.ಮೀ ಅಥವಾ 0ಎ-15.31ಗುಂ ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಮಹಿಂದ್ರ ಲೈಫ್ ಸ್ಪೇಸ್ ಡೆವಲಪರ್ಸ್ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ
1. ಅರ್ಜಿದಾರರ ಅರ್ಜಿ ದಿನಾಂಕ 20.05.2024 & 18.05.2025.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 3.4.1/ 2025, ದಿನಾಂಕ 22.05.2025.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-06/2024-25/869/2025-26, ದಿನಾಂಕ 27.05.2025.
4. ತಹಶೀಲ್ದಾರ್ ರವರು ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಈ ಕಛೇರಿ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸ/DLP-06/2024-25/869/2025-26, ದಿನಾಂಕ 27.05.2025.
5. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಶುಲ್ಕ ಪಾವತಿಸಿರುವ ಚಲನ್ ಸಂಖ್ಯೆ GN25051871, ದಿನಾಂಕ 28.05.2025.

****

ಉಲ್ಲೇಖ [1] ರಲ್ಲಿನ ಅರ್ಜಿಯಲ್ಲಿ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19ಗುಂ ಮತ್ತು ಸ.ನಂ.150 ರ ಪೈಕಿ 3ಎ-37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08 ಚ.ಮೀ ಅಥವಾ 0ಎ-15.31ಗುಂ ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ಮೆ:ಮಹಿಂದ್ರ ಲೈಫ್ ಸ್ಪೇಸ್ ಡೆವಲಪರ್ಸ್ ಲಿ., ರವರು ಕೋರಲಾಗಿರುತ್ತದೆ.

ಉಲ್ಲೇಖ [2] ರಲ್ಲಿ ನಮೂದಿಸಿರುವ ದಿನಾಂಕ 22.05.2025 ರ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯಲ್ಲಿ ವಿಷಯ ಸಂಖ್ಯೆ 3.4.1/2025 ರ ನಡವಳಿಯಲ್ಲಿ 'ಚರ್ಚೆಯ ನಂತರ, ಸಲ್ಲಿಸಿರುವ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದರಿಂದ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19 ಮತ್ತು ಸ.ನಂ.150 ರ ಪೈಕಿ 3ಎ-

Housiey.com

---

37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08ಚ.ಮೀ ಅಥವಾ 0ಎ-15.31ಗುಂ ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರು ರವರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಗಿರುತ್ತದೆ.

ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (3) ರಲ್ಲಿ ವಿವಿಧ ಶುಲ್ಕಗಳ ಬಾಬ್ತು ರೂ.95,83,290/- [ರೂ.ತೊಂಭತ್ತೈದು ಲಕ್ಷದ ಎಂಭತ್ತಾ ಮೂರು ಸಾವಿರದ ಇನ್ನೂರ ತೊಂಭತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಚಲನ್ ಪ್ರತಿಯನ್ನು ಸಲ್ಲಿಸಲು ತಿಳಿಸಲಾಗಿತ್ತು. ಅರ್ಜಿದಾರರು ಉಲ್ಲೇಖ (5) ರಲ್ಲಿ ರೂ.95,83,290/- ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. GN25051871, ದಿನಾಂಕ 28.05.2025 ರಲ್ಲಿ ಪ್ರಾಧಿಕಾರಕ್ಕೆ ಜಮಾ ಮಾಡಿ, ಬ್ಯಾಂಕ್ ದೃಢೀಕೃತ ಚಲನ್ ಪ್ರತಿಯನ್ನು ಈ ವಿಭಾಗಕ್ಕೆ ಸಲ್ಲಿಸಲಾಗಿರುತ್ತದೆ.

ಉಲ್ಲೇಖ [4] ರಲ್ಲಿ ನಮೂದಿಸಿರುವ ಈ ಕಛೇರಿ ಪತ್ರದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 363 ಬಿಎಂಆರ್ 202 (ಇ), ದಿನಾಂಕ 12.2.2024 ರ ಅನುಸಾರ ಪ್ರಶ್ನಿತ ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19ಗುಂ ಮತ್ತು ಸ.ನಂ.150 ರ ಪೈಕಿ 3ಎ-37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08 ಚ.ಮೀ ಅಥವಾ 0ಎ-15.31ಗುಂ ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇದ್ದಲ್ಲಿ 15 ದಿನಗಳೊಳಗಾಗಿ ಮಾಹಿತಿ ನೀಡಲು ತಹಶೀಲ್ದಾರ್ ರವರು ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರನ್ನು ಕೋರಲಾಗಿದ್ದು, ಸದರಿ ವರದಿ ಪ್ರಸ್ತುತ ಸ್ವೀಕೃತವಾಗಿರುವುದಿಲ್ಲ. ಪ್ರಸ್ತಾವನೆಯೊಂದಿಗೆ ಸಲ್ಲಿಸಿರುವ ನೋಟರಿ ದೃಢೀಕೃತ ಪ್ರಮಾಣ ಪತ್ರದಲ್ಲಿ ಪ್ರಶ್ನಿತ ಜಮೀನುಗಳ ಕುರಿತು ಯಾವುದೇ ದಾವೆ ಪ್ರಕರಣ ಇರುವುದಿಲ್ಲವೆಂದು ಪ್ರಮಾಣೀಕರಿಸಲಾಗಿರುತ್ತದೆ. ಆದುದರಿಂದ, ಪ್ರಶ್ನಿತ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇಲ್ಲವೆಂದು ಭಾವಿಸಿ ಅನುಮೋದನೆ ನೀಡಲು ಕ್ರಮವಹಿಸಲಾಗಿದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅನುಸಾರ ಪ್ರಶ್ನಿತ ಜಮೀನುಗಳಲ್ಲಿ ಅನುಮೋದಿತ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ ಮತ್ತು ರಸ್ತೆ ವಿಸ್ತರಣೆ ಪ್ರದೇಶಗಳನ್ನು ಪುಕ್ಕಟೆಯಾಗಿ ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸತಕ್ಕದ್ದು.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19ಗುಂ ಮತ್ತು ಸ.ನಂ.150 ರ ಪೈಕಿ 3ಎ-37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08 ಚ.ಮೀ ಅಥವಾ 0ಎ-15.31ಗುಂ

ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1 | ಅನುಮೋದಿತ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ & ರಸ್ತೆ / ರಸ್ತೆ ವಿಸ್ತರಣೆ ಪ್ರದೇಶಗಳನ್ನು ಅನುಮೋದನೆ ದಿನಾಂಕದಿಂದ 15 ದಿನಗಳೊಳಗಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಸಂಬಂಧಿಸಿದ ಸ್ಥಳೀಯ ಸಂಸ್ಥೆಯಾದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸತಕ್ಕದ್ದು ಹಾಗೂ ಸದರಿ ನೋಂದಾಯಿತ ಪರಿತ್ಯಜನಾ ಪತ್ರದ ಪ್ರತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. |
| 2 | ಪ್ರಾಧಿಕಾರವು ಅನುಮೋದಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 3 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 4 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 5 | ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳ ಅಧ್ಯಾಯ 3.16 (xv) ರ Sub Clause (b) ರನ್ವಯ ಮಾರ್ಪಡಿತ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲುಜಾಗದ ಪ್ರದೇಶವು ಸೇರಿದಂತೆ ಹಾಗೂ ವಸತಿ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ ಪ್ರತಿ 240.0 ಚ.ಮೀ Builtup Area (FAR) ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. ಸ್ವಾಧೀನಾನುಭವ ಪ್ರಮಾಣ ಪತ್ರ ವಿತರಿಸುವ ಸಕ್ಷಮ ಪ್ರಾಧಿಕಾರವು ಸದರಿ ಷರತ್ತನ್ನು ಪಾಲಿಸಿರುವ ಕುರಿತು ಮೇಲೆ ತಿಳಿಸಿದ ವಲಯ ನಿಯಮಾವಳಿಗಳ ಅವಕಾಶದಂತೆ ಪರಿಶೀಲಿಸಿ ಕ್ರಮವಹಿಸತಕ್ಕದ್ದು. |
| 6 | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. ಸಿವಿಲ್ ಕಾಮಗಾರಿ ಮತ್ತು ಕಟ್ಟಡ ಕಾಮಾಗಾರಿಗೆ BWSSB ಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಪಡೆದು ಉಪಯೋಗಿಸಿಕೊಳ್ಳತಕ್ಕದ್ದು. |
| 7 | ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಸಿ.ಎ ಜಾಗವನ್ನು ಯಥಾವತ್ತಾಗಿ ಹಾಲಿ ಸ್ಥಳದಲ್ಲಿ ವಲಯ ನಿಯಮಾವಳಿಗಳ ಅಧ್ಯಾಯ 7.1.2 ರಂತೆ ಅಭಿವೃದ್ಧಿಪಡಿಸತಕ್ಕದ್ದು. |

| | |
|---|---|
| 8 | ಅರ್ಜಿದಾರರು ಉದ್ದೇಶಿಸಿರುವ ಜಮೀನುಗಳಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ / ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 9 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿ ನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ಸದರಿ ಕಟ್ಟಡ ನಿರ್ಮಾಣ ಸಂಬಂಧಿಸಿದಂತೆ ಅವಶ್ಯವಿರುವ ವಿವಿಧ ಇಲಾಖೆಗಳಿಂದ ಅಗತ್ಯ NOC ಗಳನ್ನು ಮತ್ತು ಇನ್ನಿತರೇ ಮಾಹಿತಿಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 10 | ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನುಗಳ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿ ಅನುಮೋದನೆ ಪಡೆದಿದ್ದು ದೃಢಪಟ್ಟಲ್ಲಿ ಮತ್ತು ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯನ್ನು ರದ್ದುಗೊಳಿಸುವ ಅಥವಾ ಹಿಂಪಡೆಯುವ ಅಧಿಕಾರವನ್ನು ಕೆಟಿಸಿಪಿ ಕಾಯ್ದೆ ಕಲಂ 76 (O) ರಡಿಯಲ್ಲಿ ಪ್ರಾಧಿಕಾರದ ಆಯುಕ್ತರು ಅಧಿಕಾರ ಹೊಂದಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |
| 11 | ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನೆಯಲ್ಲಿನ ವಸತಿ ಘಟಕಗಳಿಂದ ಉತ್ಪತ್ತಿಯಾಗುವ ಘನತ್ಯಾಜ್ಯಗಳ ವಿಂಗಡಣೆ ಮತ್ತು ಶೇಖರಣೆಗಾಗಿ ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 12 | ಪ್ರಸ್ತಾವನೆಗೆ ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ತಾಂತ್ರಿಕ ಅನುಮೋದನೆ ನೀಡಿರುವುದರಿಂದ, ಈ ಅನುಮೋದನೆ ದಾಖಲೆಯನ್ನು ಮಾಲೀಕತ್ವವನ್ನು ನಿರೂಪಿಸುವ ದಾಖಲೆಯೆಂದು ಪರಿಗಣಿಸಲು ಬರುವುದಿಲ್ಲ. |
| 13 | ಪ್ರಶ್ನಿತ ಜಮೀನುಗಳನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಮಳೆ ನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 14 | ಪ್ರಶ್ನಿತ ಜಮೀನುಗಳನ್ನು ಅಭಿವೃದ್ಧಿ ಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |

| | |
|---|---|
| 15 | ನಾಲಾ ಬಫರ್ ಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಸ್ಥಳೀಯ ಸಂಸ್ಥೆ ಅಥವಾ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇತರೆ ಸರ್ಕಾರಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ Storm Water Drain ಅಥವಾ ಒಳಚರಂಡಿ ವ್ಯವಸ್ಥೆಗಳು ಹಾಗೂ ರಸ್ತೆಯನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಮುಫತ್ತಾಗಿ ಸಾರ್ವಜನಿಕ ಉಪಯೋಗಕ್ಕಾಗಿ ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |
| 16 | ರೆವಿನ್ಯೂ ದಾಖಲೆಗಳ / ಜಮೀನುಗಳ ಮಾಲೀಕತ್ವದ ದಾಖಲೆಗಳ ಸಂಬಂಧ ಯಾವುದೇ ನ್ಯಾಯಾಲಯದಲ್ಲಿ ಲೋಕಾಯುಕ್ತದಲ್ಲಾಗಲೀ ಯಾವುದೇ ಪ್ರಕರಣ ಇರುವುದಿಲ್ಲವೆಂದು ಸಲ್ಲಿಸಿರುವ ನೋಟರೈಸ್ಡ್ ಪ್ರಮಾಣ ಪತ್ರಕ್ಕೆ ಬದ್ಧರಾಗಿರತಕ್ಕದ್ದು. ಪ್ರಾಧಿಕಾರವು ಈ ಬಗ್ಗೆ ಜವಾಬ್ದಾರಿಯಾಗುವುದಿಲ್ಲ. |
| 17 | ವಸತಿ & ವಸತಿಯೇತರ ಯೋಜನೆಯಲ್ಲಿನ ವಸತಿ ಘಟಕಗಳಿಗೆ ಕುಡಿಯುವ ನೀರಿಗಾಗಿ ಮತ್ತು ಇತರ ಉಪಯೋಗದ ನೀರಿಗಾಗಿ ಪ್ರತ್ಯೇಕವಾದ ಕೊಳಾಯಿ ವ್ಯವಸ್ಥೆಯನ್ನು (Duel piping System) ಮಾಡತಕ್ಕದ್ದು. ವಸತಿ ಘಟಕಗಳಿಂದ ಬರುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲು ಯೋಜನೆಯಲ್ಲಿ ಸಂಸ್ಕರಣಾ ಘಟಕ ಸ್ಥಾಪಿಸಿ, ಸಂಸ್ಕರಿಸಿದ ನೀರನ್ನು ಇತರೆ ಉಪಯೋಗಗಳಿಗಾಗಿ ಉಪಯೋಗಿಸತಕ್ಕದ್ದು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 18 | BWSSB,BESCOM, KSPCB, ವಾಯುಯಾನ ಪ್ರಾಧಿಕಾರ, ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದನೆ ಮೊದಲು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಿರುತ್ತದೆ. ಅನುಮತಿ ನೀಡುವ ಸಕ್ಷಮ ಪ್ರಾಧಿಕಾರವು ಅದನ್ನು ಪರಿಸೀಲಿಸಿಕೊಳ್ಳತಕ್ಕದ್ದು. |
| 19 | ಪ್ರಶ್ನಿತ ಜಮೀನುಗಳಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 20 | ರೇರಾ ಅಧಿನಿಯಮ, 2016 ಹಾಗೂ ಸಂಬಂದಿತ ನಿಯಮಗಳು, 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿ ಮಾಡಿಸುವುದು. |
| 21 | ಸ್ವಾಭಾವಿಕವಾಗಿ ಇಳಿಮಟ್ಟದ ಕಡೆ ಹೋಗುವ ಮಳೆನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು. |
| 22 | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 23 | ಬಫರ್ ಪ್ರದೇಶದಲ್ಲಿ ಗಿಡಮರಗಳನ್ನು ಬೆಳಸತಕ್ಕದ್ದು. |
| 24 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ದರಾಗಿರುವುದು. |

ಮೇಲ್ಕಂಡ ಷರತ್ತುಗಳಿಗೊಳಪಟ್ಟು, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19ಗುಂ ಮತ್ತು ಸ.ನಂ.150 ರ ಪೈಕಿ 3ಎ-37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08ಚ.ಮೀ ಅಥವಾ 0ಎ-15.31ಗುಂ ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್ ಪುರ ಹೋಬಳಿ, ಪಟ್ಟಂದೂರು ಅಗ್ರಹಾರ ಗ್ರಾಮದ ಸ.ನಂ.149 ರಲ್ಲಿ 5ಎ-19ಗುಂ ಮತ್ತು ಸ.ನಂ.150 ರ ಪೈಕಿ 3ಎ-37.69ಗುಂ ಒಟ್ಟು 9ಎ-16.69ಗುಂ [ಮೆಟ್ರೊ ಯೋಜನೆಗಾಗಿ ಭೂಸ್ವಾಧೀನವಾಗಿರುವ 1549.08 ಚ.ಮೀ ಅಥವಾ 0ಎ-15.31ಗುಂ ಹೊರತುಪಡಿಸಿ] ಪೈಕಿ ಸ್ಥಳದಲ್ಲಿ ಲಭ್ಯವಿರುವ 9ಎ-14.72ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಗೆ ಮೆ:ಮಹಿಂದ್ರ ಲೈಫ್ ಸ್ಪೇಸ್ ಡೆವಲಪರ್ಸ್ ಲಿ., ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ & ವಸತಿಯೇತರ [ವಾಣಿಜ್ಯ] ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು,
ಬೆಂಅಪ್ರಾ, ಬೆಂಗಳೂರು.

ಇವರಿಗೆ,

ಮೆ:ಮಹಿಂದ್ರ ಲೈಫ್ ಸ್ಪೇಸ್ ಡೆವಲಪರ್ಸ್ ಲಿ.,

ನಂ.49/50/2, ಹಾಲಿಡೆ ವಿಲೇಜ್ ರಸ್ತೆ,

ವಾಜರಹಳ್ಳಿ ಗ್ರಾಮ,

ಬೆಂಗಳೂರು-560062.

Housiey.com